**Akashvani : Bangalore**
**National Bulletin In Kannada**
**28.03.2025 / 19.35 hrs**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**28.03.2025 / 19.35 hrs**

**<><*<><>*><>**

**ಮುಖ್ಯಾಂಶಗಳು**

**೧. ಇಪ್ಪತ್ತೆರಡು ಸಾವಿರದ ೯೧೯ ಕೋಟಿ ರೂಪಾಯಿ ವೆಚ್ಚದಲ್ಲಿ ಎಲೆಕ್ಟ್ರಾನಿಕ್ಸ್ ಘಟಕಗಳ ಉತ್ಪಾದನೆ ಯೋಜನೆಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ**

**೨. ಕೇಂದ್ರ ಸರ್ಕಾರಿ ನೌಕರರ ತುಟ್ಟಿ ಭತ್ಯೆ, ತುಟ್ಟಿ ಪರಿಹಾರ ಹೆಚ್ಚಳ**

**೩. ನ್ಯಾಯಮೂರ್ತಿ ಯಶವಂತ್‌ವರ್ಮಾ ಮನೆಯಲ್ಲಿ ನಗದು ಪತ್ತೆ ಪ್ರಕರಣ; ಎಫ್‌ಐಆರ್ ದಾಖಲಿಸುವಂತೆ ಕೋರಿ ಸಲ್ಲಿಸಿದ್ದ ಅರ್ಜಿ ವಜಾಗೊಳಿಸಿದ ಸುಪ್ರೀಂಕೋರ್ಟ್**

**೪. ಐಪಿಎಲ್ ಟಿ-೨೦ ಕ್ರಿಕೆಟ್: ರಾಯಲ್ ಚಾಲೆಂಜರ್ಸ್ ಬೆಂಗಳೂರು - ಚೆನ್ನೈ ಸೂಪರ್ ಕಿಂಗ್ಸ್ ಮುಖಾಮುಖಿ**

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ಇಂದು ನಡೆದ ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ, ೨೨ ಸಾವಿರದ ೯೧೯ ಕೋಟಿ ರೂಪಾಯಿ ವೆಚ್ಚದಲ್ಲಿ ಎಲೆಕ್ಟ್ರಾನಿಕ್ಸ್ ಘಟಕಗಳ ಉತ್ಪಾದನಾ ಯೋಜನೆಗೆ ಅನುಮೋದನೆ ದೊರೆತಿದೆ. ಇದು ಎಲೆಕ್ಟ್ರಾನಿಕ್ಸ್ ಪೂರೈಕೆ ಜಾಲದೊಂದಿಗೆ ಭಾರತವನ್ನು ಸ್ವಾವಲಂಬಿಯಾಗಿಸುವ ನಿಟ್ಟಿನಲ್ಲಿ ಪ್ರಮುಖ ಹೆಜ್ಜೆಯಾಗಿದೆ. ಈ ಮೂಲಕ ಎಲೆಕ್ಟ್ರಾನಿಕ್ಸ್ ಘಟಕಗಳ ಉತ್ಪಾದನಾ ವಲಯದಲ್ಲಿ ದೊಡ್ಡ ಹೂಡಿಕೆಗಳನ್ನು ಆಕರ್ಷಿಸುವುದು, ಸಾಮರ್ಥ್ಯ ಹೆಚ್ಚಿಸುವ ಮೌಲ್ಯವರ್ಧನೆ ಮತ್ತು ಭಾರತೀಯ ಕಂಪನಿಗಳನ್ನು ಜಾಗತಿಕ ವಿತರಣಾ ಜಾಲದೊಂದಿಗೆ ಸಂಯೋಜಿಸುವ ಮೂಲಕ ದೃಢವಾದ ಘಟಕ ಪರಿಸರ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸುವುದು ಇದರ ಪ್ರಮುಖ ಗುರಿಯಾಗಿದೆ. ಈ ಯೋಜನೆಯು ೫೯ ಸಾವಿರದ ೩೫೦ ಕೋಟಿ ರೂಪಾಯಿಗಳ ಹೂಡಿಕೆಯನ್ನು ಆಕರ್ಷಿಸಿ, ೪ ಲಕ್ಷದ ೫೬ ಸಾವಿರದ ೫೦೦ ಕೋಟಿ ರೂಪಾಯಿ ಮೊತ್ತದ ಉತ್ಪಾದನೆ ಮತ್ತು ೯೧ ಸಾವಿರದ ೬೦೦ ಜನರಿಗೆ ಹೆಚ್ಚುವರಿ ನೇರ ಉದ್ಯೋಗ ಮತ್ತು ಹಲವರಿಗೆ ಪರೋಕ್ಷ ಉದ್ಯೋಗಗಳನ್ನು ಸೃಷ್ಟಿಸುವ ಗುರಿಯನ್ನು ಹೊಂದಿದೆ. ಈ ಯೋಜನೆಯು ಭಾರತೀಯ ಉತ್ಪಾದಕರಿಗೆ ವಿಭಿನ್ನ ಪ್ರೋತ್ಸಾಹಕಗಳನ್ನು ಒದಗಿಸುತ್ತದೆ. ಇದರಿಂದಾಗಿ ಅವರು ತಾಂತ್ರಿಕ ಸಾಮರ್ಥ್ಯಗಳನ್ನು ಹೆಚ್ಚಿಸಿಕೊಳ್ಳಬಹುದು ಮತ್ತು ಬಲಿಷ್ಠ ಆರ್ಥಿಕತೆಯನ್ನು ಸಾಧಿಸಬಹುದು.

**<><*<><>*><>**

ಉತ್ಪಾದನೆಗೆ ಸಂಬಂಧಿಸಿದ ಪ್ರೋತ್ಸಾಹಕ ಯೋಜನೆ-ಪಿಎಲ್‌ಐ ಅಡಿ ಅರೆವಾಹಕವಲ್ಲದ ಎಲೆಕ್ಟ್ರಾನಿಕ್ಸ್ ಘಟಕಗಳಿಗೆ ೨೨ ಸಾವಿರದ ೯೧೯ ಕೋಟಿ ರೂಪಾಯಿ ವೆಚ್ಚದ ಯೋಜನೆಗೆ ಕೇಂದ್ರ ಸಚಿವ ಸಂಪುಟ

ಅನುಮೋದನೆ ನೀಡಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ದೆಹಲಿಯಲ್ಲಿಂದು ತಿಳಿಸಿದ್ದಾರೆ. ಸಚಿವ ಸಂಪುಟ ಸಭೆ ಬಳಿಕ ವಿಡಿಯೋ ಕಾನ್ಫರೆನ್ಸ್ ಮೂಲಕ ಮಾಹಿತಿ ಹಂಚಿಕೊಂಡ ಅವರು, ಭಾರತವನ್ನು ಎಲೆಕ್ಟ್ರಾನಿಕ್ಸ್ ಉತ್ಪಾದನೆ ಮತ್ತು ಪೂರೈಕೆ ಸರಪಳಿಯಲ್ಲಿ ಆತ್ಮನಿರ್ಭರ ಮಾಡುವ ಉದ್ದೇಶದಿಂದ ಎಲೆಕ್ಟ್ರಾನಿಕ್ಸ್ ಘಟಕ ಉತ್ಪಾದನಾ ಯೋಜನೆಗೆ ಅನುಮತಿ ನೀಡಲಾಗಿದೆ. ಜೊತೆಗೆ ಎಲೆಕ್ಟ್ರಾನಿಕ್ ಬಿಡಿಭಾಗಗಳ ಉತ್ಪಾದನಾ ಯೋಜನೆಗೂ ಸಮ್ಮತಿ ನೀಡಲಾಗಿದೆ ಎಂದರು. ಈ ಯೋಜನೆಯಡಿ ೯೧ ಸಾವಿರಕ್ಕೂ ಹೆಚ್ಚು ನೇರ ಹಾಗೂ ಪರೋಕ್ಷ ಉದ್ಯೋಗಗಳ ಸೃಷ್ಟಿಗೆ ಸಹಕಾರಿಯಾಗಲಿದೆ. ಕಳೆದ ಹತ್ತು ವರ್ಷಗಳಲ್ಲಿ ಎಲೆಕ್ಟ್ರಾನಿಕ್ ಕ್ಷೇತ್ರ ಅಗಾಧ ಬೆಳವಣಿಗೆ ಕಂಡಿದೆ. ಎಲೆಕ್ಟ್ರಾನಿಕ್ ಉತ್ಪಾದನೆ ಶೇಕಡ ೧೭ರಷ್ಟು ವಾರ್ಷಿಕ ಬೆಳವಣಿಗೆ ದರದೊಂದಿಗೆ ಐದು ಪಟ್ಟು ಹೆಚ್ಚಾಗಿದೆ. ಎಲೆಕ್ಟ್ರಾನಿಕ್ ರಫ್ತು ಪ್ರಸಕ್ತ ವರ್ಷದಲ್ಲಿ ಶೇಕಡ ೨೦ರಷ್ಟು ಹೆಚ್ಚಾಗಿದೆ. ಕಳೆದ ಹತ್ತು ವರ್ಷದಲ್ಲಿ ೨೫ ಲಕ್ಷ ಉದ್ಯೋಗ ಸೃಷ್ಟಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು. ೨೦೧೪-೧೫ರಲ್ಲಿ ಒಂದು ಲಕ್ಷ ೯೦ ಸಾವಿರ ಕೋಟಿಯಷ್ಟಿದ್ದ ಎಲೆಕ್ಟ್ರಾನಿಕ್ ಸರಕುಗಳ ದೇಶೀಯ ಉತ್ಪಾದನೆ ೨೦೨೩-೨೪ರಲ್ಲಿ ೯ ಲಕ್ಷ ೫೨ ಸಾವಿರ ಕೋಟಿಗೆ ಏರಿಕೆಯಾಗಿದೆ. ಹೊಸದಾಗಿ ಘೋಷಿಸಿರುವ ಯೋಜನೆಯಿಂದ ಎಲೆಕ್ಟ್ರಾನಿಕ್ ಘಟಕ ಉತ್ಪಾದನಾ ಪರಿಸರ ವ್ಯವಸ್ಥೆಯಲ್ಲಿ ದೊಡ್ಡ ಹೂಡಿಕೆ ಆಕರ್ಷಿಸುವ ಜೊತೆಗೆ ಪರಿಸರ ವ್ಯವಸ್ಥೆ ಅಭಿವೃದ್ಧಿಪಡಿಸಲು ಸಹಕಾರಿಯಾಗಲಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದರು.

**ಧ್ವನಿ: ಅಶ್ವಿನಿ ವೈಷ್ಣವ್ (೨೧ ಸೆಕೆಂಡ್‌ಗಳು)**

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ಇಂದು ನಡೆದ ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ, ಕೇಂದ್ರ ಸರ್ಕಾರಿ ನೌಕರರಿಗೆ ಹೆಚ್ಚುವರಿ ತುಟ್ಟಿ ಭತ್ಯೆ-ಡಿಎ ಮತ್ತು ಪಿಂಚಣಿದಾರರಿಗೆ ತುಟ್ಟಿ ಪರಿಹಾರ-ಡಿಆರ್ ಬಿಡುಗಡೆ ಮಾಡಲು ಅನುಮೋದನೆ ನೀಡಿದೆ. ಇದು ಮೂಲವೇತನ ಅಥವಾ ಪಿಂಚಣಿಯ ಅಸ್ತಿತ್ವದಲ್ಲಿರುವ ದರಕ್ಕಿಂತ ಶೇಖಡ ೨ ರಷ್ಟು ಹೆಚ್ಚಳವಾಗಿದೆ. ತುಟ್ಟಿ ಭತ್ಯೆ ಮತ್ತು ತುಟ್ಟಿ ಪರಿಹಾರ ಎರಡರ ಹೆಚ್ಚಳದಿಂದಾಗಿ ಬೊಕ್ಕಸಕ್ಕೆ ವಾರ್ಷಿಕ ಒಟ್ಟು ೬ ಸಾವಿರರ ೬೧೪ ಕೋಟಿ ೪ ಲಕ್ಷ ರೂಪಾಯಿಗಳ ಹೊರೆಬೀಳಲಿದೆ. ಇದರಿಂದ ಸುಮಾರು ೪೮ ಲಕ್ಷ ೬೬ ಸಾವಿರ ಕೇಂದ್ರ ಸರ್ಕಾರಿ ನೌಕರರು ಮತ್ತು ೬೬ ಲಕ್ಷ ೫೫ ಸಾವಿರ ಪಿಂಚಣಿದಾರರಿಗೆ ಪ್ರಯೋಜನವಾಗಲಿದೆ.

**<><*<><>*><>**

ಆಯುಷ್ಮಾನ್ ಭಾರತ್-ಪ್ರಧಾನಮಂತ್ರಿ ಜನ ಆರೋಗ್ಯ ಯೋಜನೆಯಡಿ ಈ ವರ್ಷದ ಮಾರ್ಚ್ ೧ ರ ವೇಳೆಗೆ ೧.೨೬ ಲಕ್ಷ ಕೋಟಿ ರೂಪಾಯಿ ಮೌಲ್ಯದ ಚಿಕಿತ್ಸೆ ಪ್ರಯೋಜನವನ್ನು ನಾಗರಿಕರು ಪಡೆದಿದ್ದಾರೆ ಎಂದು ಕೇಂದ್ರ ಆರೋಗ್ಯ ಸಚಿವ ಜೆ.ಪಿ.ನಡ್ಡಾ ತಿಳಿಸಿದ್ದಾರೆ. ಲೋಕಸಭೆಯಲ್ಲಿಂದು ಮಾತನಾಡಿದ ಅವರು, ಆಶಾ ಕಾರ್ಯಕರ್ತೆಯರಿಗೆ ೧೦ ಲಕ್ಷಕ್ಕೂ ಅಧಿಕ ಆಯುಷ್ಮಾನ್ ಕಾರ್ಡ್‌ಗಳು ಹಾಗೂ ಅಂಗನವಾಡಿ ಕಾರ್ಯಕರ್ತೆಯರಿಗೆ ೧೪.೪೭ ಲಕ್ಷ ಆಯುಷ್ಮಾನ್ ಕಾರ್ಡ್‌ಗಳನ್ನು ಸೃಷ್ಟಿಸಲಾಗಿದೆ ಎಂದು ಮಾಹಿತಿ ನೀಡಿದರು. ೧೩ ಸಾವಿರದ ೮೬೬ ಖಾಸಗಿ ಆಸ್ಪತ್ರೆಗಳು ಹಾಗೂ ೧೭ ಸಾವಿರದ ೯೧ ಸಾರ್ವಜನಿಕ ಆಸ್ಪತ್ರೆಗಳು ಸೇರಿದಂತೆ ಒಟ್ಟು ೩೦ ಸಾವಿರದ ೯೫೭ ಆಸ್ಪತ್ರೆಗಳನ್ನು ಈ ಯೋಜನೆಯಡಿ ಸೇರ್ಪಡೆ ಮಾಡಲಾಗಿದೆ ಎಂದು ಸಚಿವ ಜೆ.ಪಿ.ನಡ್ಡಾ ಹೇಳಿದರು.

**<><*<><>*><>**

ರಾಜ್ಯಸಭೆಯು ವಿಮಾನ ವಸ್ತುಗಳ ವಿಧೇಯಕ ೨೦೨೫ ಅನ್ನು ಚರ್ಚೆಗೆ ಕೈಗೆತ್ತಿಕೊಂಡಿದೆ. ಶಿಷ್ಟಾಚಾರದ ನಿಬಂಧನೆಗಳನ್ನು ಕಾರ್ಯಗತಗೊಳಿಸಲು, ನಿಯಮಗಳನ್ನು ರಚಿಸಲು, ಈ ವಿಧೇಯಕ ಕೇಂದ್ರ ಸರ್ಕಾರಕ್ಕೆ ಅಧಿಕಾರ ನೀಡುತ್ತದೆ. ಅಲ್ಲದೇ ಈ ವಿಧೇಯಕವು ನಾಗರಿಕ ವಿಮಾನಯಾನ ಮಹಾನಿರ್ದೇಶನಾಲಯವನ್ನು ನೋಂದಣಿ ಪ್ರಾಧಿಕಾರವಾಗಿ ಗೊತ್ತುಪಡಿಸುತ್ತದೆ. ಚರ್ಚೆ ಆರಂಭಿಸಿದ ಕಾಂಗ್ರೆಸ್ ಸಂಸದ ನೀರಜ್ ಡಾಂಗಿ, ವಿಮಾನ ನಿಲ್ದಾಣಗಳ ಖಾಸಗೀಕರಣ ಮತ್ತು ಹೆಚ್ಚಿನ ವಿಮಾನ ದರಗಳ ವಿಷಯವನ್ನು ಪ್ರಸ್ತಾಪಿಸಿದರು. ದೇಶವು ವೈದ್ಯಕೀಯ ಪ್ರವಾಸೋದ್ಯಮ ಕೇಂದ್ರವಾಗುತ್ತಿರುವುದರಿಂದ ಏರ್ ಆಂಬ್ಯುಲೆನ್ಸ್ ಸೇವೆಗಳನ್ನು ವಿಸ್ತರಿಸಬೇಕು ಎಂದು ಅವರು ಒತ್ತಾಯಿಸಿದರು. ಬಿಜೆಪಿ ಸಂಸದ ಧನಂಜಯ್ ಭೀಮರಾವ್ ಮಹಾದಿಕ್ ಮಾತನಾಡಿ, ದೇಶದಲ್ಲಿ ಪ್ರಬಲವಾದ ನಾಗರಿಕ ವಿಮಾನಯಾನ ಮೂಲಸೌಕರ್ಯವನ್ನು ನಿರ್ಮಿಸಲು ತೆಗೆದುಕೊಂಡ ಕ್ರಮಗಳನ್ನು ಒತ್ತಿ ಹೇಳಿದರು.  ೨೦೧೪ ರಲ್ಲಿ ಕೇವಲ ೭೪ ವಿಮಾನ ನಿಲ್ದಾಣಗಳು ಕಾರ್ಯನಿರ್ವಹಿಸುತ್ತಿದ್ದವು. ೨೦೨೪ ರಲ್ಲಿ ಇದು ೧೮೯ ಕ್ಕೆ ತಲುಪಿದ್ದು, ವಿಮಾನಯಾನ ಮಾರ್ಗಗಳು ಕೂಡ ೯೦೦ಕ್ಕೆ ಏರಿಕೆಯಾಗಿದೆ. ವಿಮಾನ ಪ್ರಯಾಣಿಕರ ಸಂಖ್ಯೆ ೧೬ ಕೋಟಿಗೆ ತಲುಪಿದೆ ಎಂದು ಅವರು ಮಾಹಿತಿ ನೀಡಿದರು. ಚರ್ಚೆಗಳ ಬಳಿಕ ಲೋಕಸಭೆ ಮತ್ತು ರಾಜ್ಯಸಭೆ ಕಲಾಪಗಳನ್ನು ಏಪ್ರಿಲ್ ೧ರ ಬೆಳಗ್ಗೆ ೧೧ ಗಂಟೆಗೆ ಮುಂದೂಡಲಾಯಿತು.

**<><*<><>*><>**

"ಭಾರತ ಮೊದಲು" ಎಂಬುದು ದೇಶದ ವಿದೇಶಾಂಗ ನೀತಿಯ ಮಂತ್ರವಾಗಿದೆ ಮತ್ತು ಈಗ ಭಾರತ ವಿಶ್ವ ಕ್ರಮದಲ್ಲಿ ಭಾಗವಹಿಸುವುದಲ್ಲದೆ, ಭವಿಷ್ಯವನ್ನು ರೂಪಿಸಲು ಮತ್ತು ಸುರಕ್ಷಿತಗೊಳಿಸಲು ಕೊಡುಗೆ ನೀಡುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.  ನವದೆಹಲಿಯಲ್ಲಿ ಇಂದು ಖಾಸಗಿ ಟಿವಿ ಚಾನೆಲ್ ಆಯೋಜಿಸಿದ್ದ ಕಾರ್ಯಕ್ರಮವೊಂದರಲ್ಲಿ ಮಾತನಾಡುತ್ತಾ ಮಾತನಾಡಿದ ಅವರು, ಭಾರತವು ಏಕಸ್ವಾಮ್ಯಕ್ಕಿಂತ ಮಾನವೀಯತೆಗೆ ಆದ್ಯತೆ ನೀಡಿದೆ ಮತ್ತು ಸಮಾನ ಭಾಗವಹಿಸುವಿಕೆಯನ್ನು ಖಚಿತಪಡಿಸಿಕೊಳ್ಳುವ ಮೂಲಕ ೨೧ನೇ ಶತಮಾನದ ಜಾಗತಿಕ ಸಂಸ್ಥೆಯ ಸೃಷ್ಟಿಗೆ ದಾರಿ ಮಾಡಿಕೊಟ್ಟಿದೆ ಎಂದು ಹೇಳಿದರು.

**<><*<><>*><>**

ದೆಹಲಿ ಹೈಕೋರ್ಟ್‌ನ ನ್ಯಾಯಮೂರ್ತಿಯಾಗಿದ್ದ ಯಶವಂತ್ ವರ್ಮಾ ಅವರ ಅಧಿಕೃತ ನಿವಾಸದಲ್ಲಿ ಅಕ್ರಮ ಹಣ ಪತ್ತೆಯಾದ ಆರೋಪದ ಮೇಲೆ ಅವರ ವಿರುದ್ಧ ಎಫ್ಐಆರ್ ದಾಖಲಿಸುವಂತೆ ಕೋರಿ ಸಲ್ಲಿಸಲಾಗಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ಇಂದು ವಜಾಗೊಳಿಸಿದೆ.  ಸುಪ್ರೀಂ ಕೋರ್ಟ್‌ನ ನ್ಯಾಯಮೂರ್ತಿ ಅಭಯ್ ಓಕಾ ಮತ್ತು ನ್ಯಾಯಮೂರ್ತಿ ಉಜ್ಜಲ್ ಭುಯಾನ್ ಅವರಿದ್ದ ನ್ಯಾಯಪೀಠವು ಅರ್ಜಿಯನ್ನು ಆಲಿಸಿ, ಆಂತರಿಕ ತನಿಖೆಯನ್ನು ಪೂರ್ಣಗೊಳಿಸುವಂತೆ ಸೂಚಿಸಿದೆ. ಆಂತರಿಕ ತನಿಖೆಯಲ್ಲಿ ನ್ಯಾಯಮೂರ್ತಿ ಯಶವಂತ್ ವರ್ಮಾ ತಪ್ಪಿತಸ್ಥರೆಂದು ಕಂಡುಬಂದರೆ, ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಗಳು, ಎಫ್ಐಆರ್ ದಾಖಲಿಸಲು ಆದೇಶಿಸುವ ಅಥವಾ ಅವರನ್ನು ವಜಾಗೊಳಿಸುವಂತೆ ಸರ್ಕಾರಕ್ಕೆ ಶಿಫಾರಸು ಮಾಡುವ ಆಯ್ಕೆಯನ್ನು ಹೊಂದಿರುತ್ತಾರೆ ಎಂದು ನ್ಯಾಯಪೀಠ ಹೇಳಿದೆ.  ಇತ್ತೀಚೆಗೆ ದೆಹಲಿಯ ಅವರ ನಿವಾಸದಲ್ಲಿ ಬೆಂಕಿ ಅವಘಡದ ನಂತರ ನ್ಯಾಯಮೂರ್ತಿ ಯಶವಂತ್ ವರ್ಮಾ ಅವರ ಮನೆಯಿಂದ ಹಣದ ಚೀಲಗಳನ್ನು ವಶಪಡಿಸಿಕೊಳ್ಳಲಾಗಿತ್ತು.

**<><*<><>*><>**

ಆಕಾಶವಾಣಿಯ ಜನಪ್ರಿಯ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ಇದೇ ೩೦ರ ಭಾನುವಾರ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ಅಲೋಚನೆ ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೦ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮಕ್ಕಾಗಿ ಸಾರ್ವಜನಿಕರಿಂದ ಅನಿಸಿಕೆ, ಅಭಿಪ್ರಾಯಗಳನ್ನು ಆಹ್ವಾನಿಸಲಾಗಿದ್ದು, ಆಸಕ್ತರು ಟೋಲ್ ಫ್ರೀ ಸಂಖ್ಯೆ ೧೮೦೦-೧೧-೭೮೦೦ ಮೂಲಕ ತಮ್ಮ ವಿಚಾರ  ಹಂಚಿಕೊಳ್ಳಬಹುದು. ಇದರ ಜತೆಗೆ ನಮೋ ಆಪ್ ಮತ್ತು ಒಥಿ ಉov.iಟ ಜಾಲತಾಣದ ಮೂಲಕ ತಮ್ಮ ಅನಿಸಿಕೆ-ಅಭಿಪ್ರಾಯ ಹಂಚಿಕೊಳ್ಳಲು ಇಂದು ಕೊನೆಯ ದಿನವಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಬಿತ್ತರಗೊಳ್ಳಲಿದೆ. ಅಲ್ಲದೇ, ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿ ನೇರ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕಭಾಷೆಗಳಲ್ಲಿ ಪ್ರಧಾನಿ ಭಾಷಣ ಬಿತ್ತರವಾಗಲಿದೆ.

<><*<><>*><>

ಚೆನ್ನೈನ ಎಂ.ಎ.ಚಿದಂಬರಂ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ತಂಡ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಚೆನ್ನೈ ಸೂಪರ್ ಕಿಂಗ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

<><*<><>*><>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ- ಸೆನ್ಸೆಕ್ಸ್ ೧೯೨ ಅಂಕಗಳು ಇಳಿಕೆಯಾಗಿದ್ದು, ದಿನದ ಅಂತ್ಯಕ್ಕೆ ೭೭ ಸಾವಿರದ ೪೧೫ ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ- ನಿಫ್ಟಿ ೭೩ ಅಂಕಗಳು ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೩ ಸಾವಿರದ ೫೧೯ ಅಂಕಗಳು ದಾಖಲಾಗಿದೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ ೬ನೇ ಬಿಮ್‌ಸ್ಟೆಕ್ ಶೃಂಗಸಭೆಯಲ್ಲಿ ಭಾಗವಹಿಸಲು ಏಪ್ರಿಲ್ ೩ ರಿಂದ ಎರಡು ದಿನಗಳ ಕಾಲ ಥೈಲ್ಯಾಂಡ್‌ನ ಬ್ಯಾಂಕಾಕ್‌ಗೆ ಭೇಟಿ ನೀಡಲಿದ್ದಾರೆ.  ಥೈಲ್ಯಾಂಡ್ ಪ್ರಧಾನಿ ಪೇಟೊಂಗ್‌ಟಾರ್ನ್ ಶಿನವಾತ್ರ ಅವರ ಆಹ್ವಾನದ ಮೇರೆಗೆ ಅವರು ಪ್ರವಾಸ ಕೈಗೊಳ್ಳಲಿದ್ದಾರೆ. ಇದು ಪ್ರಧಾನಿ ಮೋದಿ ಅವರ ಮೂರನೇ ಥೈಲ್ಯಾಂಡ್ ಭೇಟಿಯಾಗಲಿದೆ. ಸಭೆಯಲ್ಲಿ, ಬಿಮ್‌ಸ್ಟೆಕ್ ನಾಯಕರು ಬಿಮ್‌ಸ್ಟೆಕ್ ಚೌಕಟ್ಟಿನೊಳಗೆ ಸಹಯೋಗವನ್ನು ವೃದ್ಧಿಸಲು ವಿವಿಧ ಸಂಸ್ಥೆಗಳು ಮತ್ತು ಸಾಮರ್ಥ್ಯ ವೃದ್ಧಿ ಕ್ರಮಗಳ ಕುರಿತು ಚರ್ಚಿಸುವ ನಿರೀಕ್ಷೆಯಿದೆ. ಭೇಟಿಯ ಎರಡನೇ ಚರಣದಲ್ಲಿ ಪ್ರಧಾನಿ ನರೇಂದ್ರ ಮೋದಿ, ಶ್ರೀಲಂಕಾ ಅಧ್ಯಕ್ಷ ಅನುರ ಕುಮಾರ ದಿಸ್ಸಾನಾಯಕೆ ಅವರ ಆಹ್ವಾನದ ಮೇರೆಗೆ ಏಪ್ರಿಲ್ ೪ ರಿಂದ ಮೂರು ದಿನಗಳ ಭೇಟಿಗಾಗಿ ಶ್ರೀಲಂಕಾಕ್ಕೆ ಪ್ರಯಾಣಿಸಲಿದ್ದಾರೆ. ಭೇಟಿಯ ಸಮಯದಲ್ಲಿ, ಶ್ರೀಲಂಕಾ ಅಧ್ಯಕ್ಷ ದಿಸಾನಾಯಕ ಅವರೊಂದಿಗೆ ಚರ್ಚೆ ನಡೆಸಲಿದ್ದಾರೆ. ಇದೇ ವೇಳೆ ಪ್ರಧಾನಿ, ಹಿರಿಯ ಗಣ್ಯರು ಮತ್ತು ರಾಜಕೀಯ ನಾಯಕರೊಂದಿಗೆ ನಡೆಯುವ ಸಭೆಗಳಲ್ಲಿಯೂ ಭಾಗವಹಿಸಲಿದ್ದಾರೆ. ನಂತರ ಭಾರತದ ಆರ್ಥಿಕ ನೆರವಿನೊಂದಿಗೆ ಜಾರಿಗೆ ತರಲಾದ ಅಭಿವೃದ್ಧಿ ಯೋಜನೆಗಳ ಉದ್ಘಾಟನೆಗಾಗಿ ಅವರು ಅನುರಾಧಪುರಕ್ಕೆ ಪ್ರಯಾಣಿಸಲಿದ್ದಾರೆ.

<><*<><>*><>

ಮ್ಯಾನ್ಮಾರ್ ಮತ್ತು  ಥೈಲ್ಯಾಂಡ್‌ನಲ್ಲಿ ಇಂದು ಭೂಕಂಪನ ಸಂಭವಿಸಿದೆ. ರಿಕ್ಟರ್ ಮಾಪಕದಲ್ಲಿ ೭.೭ ಮತ್ತು ೬.೪ ಭೂಕಂಪನದ ತೀವ್ರತೆಯು ದಾಖಲಾಗಿದೆ. ಭೂಕಂಪನದ ತೀವ್ರತೆಗೆ ಮ್ಯಾನ್ಮಾರ್‌ನ ಮಂಡಲೇಯಲ್ಲಿರುವ ಪ್ರಸಿದ್ಧ ಅವಾ ಸೇತುವೆ ಕುಸಿದು ಇರಾವಡ್ಡಿ ನದಿಯಲ್ಲಿ ಬಿದ್ದಿದ್ದು, ಹಲವಾರು ಕಟ್ಟಡಗಳು ಕುಸಿದಿವೆ ಎಂದು ವರದಿಯಾಗಿದೆ. ಸಾಗೈಂಗ್ ಬಳಿ ಭೂಕಂಪನದ ಕೇಂದ್ರಬಿಂದುವಿದೆ. ಥೈಲ್ಯಾಂಡ್‌ನ ರಾಜಧಾನಿ ಬ್ಯಾಂಕಾಕ್‌ನಿಂದ ಸುಮಾರು ೯೦೦ ಕಿಲೋ ಮೀಟರ್ ದೂರದಲ್ಲಿ ಬಲವಾದ ಭೂಕಂಪನದ ಅನುಭವವಾಗುದ್ದು, ಜನರು ತಮ್ಮ ಮನೆಗಳಿಂದ ಹೊರಗೆ ಓಡಿಹೋಗಿದ್ದಾರೆ. ಬ್ಯಾಂಕಾಕ್‌ನಲ್ಲಿ ನಿರ್ಮಾಣ ಹಂತದಲ್ಲಿದ್ದ ಒಂದು ಎತ್ತರದ ಕಟ್ಟಡ ಕುಸಿದಿದ್ದು, ಸಂಭವನೀಯ ಸಾವು-ನೋವುಗಳು ಬಗ್ಗೆ ಇನ್ನೂ ತಿಳಿದುಬಂದಿಲ್ಲ. ಭೂಕಂಪದ ಪರಿಣಾಮವನ್ನು ನಿಭಾಯಿಸಲು ಥೈಲ್ಯಾಂಡ್ ಪ್ರಧಾನಿ ಪೇಟೊಂಗ್‌ಟಾರ್ನ್ ಶಿನವಾತ್ರ ತುರ್ತು ಸಭೆ ಕರೆದಿದ್ದಾರೆ.  ಇದೇ ವೇಳೆ ಕೋಲ್ಕತ್ತಾ ಮತ್ತು ಇಂಫಾಲ್‌ನಲ್ಲಿ ಲಘು ಭೂಕಂಪನದ ಅನುಭವವಾಗಿದೆ. ಮ್ಯಾನ್ಮಾರ್ ಮತ್ತು ಥೈಲ್ಯಾಂಡ್‌ನಲ್ಲಿ ಇಂದು ಸಂಭವಿಸಿದ ಭೂಕಂಪದ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಕಳವಳ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಮ್ಯಾನ್ಮಾರ್ ಮತ್ತು ಥೈಲ್ಯಾಂಡ್ ನಾಗರೀಕರ ಸುರಕ್ಷತೆ ಮತ್ತು ಯೋಗಕ್ಷೇಮಕ್ಕಾಗಿ ಪ್ರಾರ್ಥಿಸಿದ್ದಾರೆ. ಭಾರತವು ಸಾಧ್ಯವಿರುವ ಎಲ್ಲ ಸಹಾಯವನ್ನು ನೀಡಲು ಸಿದ್ಧವಾಗಿದ್ದು ಮ್ಯಾನ್ಮಾರ್ ಮತ್ತು ಥೈಲ್ಯಾಂಡ್ ಸರ್ಕಾರಗಳೊಂದಿಗೆ ಸಂಪರ್ಕದಲ್ಲಿರಲು ವಿದೇಶಾಂಗ ಸಚಿವಾಲಯಕ್ಕೆ ಸೂಚಿಸಿದ್ದಾರೆ.

**<><*<><>*><>**

ಜಾರ್ಖಂಡ್‌ನ ರಾಂಚಿಯಲ್ಲಿ ಇಂದು ನಡೆಯುತ್ತಿರವ ರಾಷ್ಟ್ರೀಯ ಮಹಿಳಾ ಹಾಕಿ ಲೀಗ್‌ನ ಫೈನಲ್ ಪಂದ್ಯದಲ್ಲಿ 'ಹಾಕಿ ಹರಿಯಾಣ' ಮತ್ತು 'ಒಡಿಶಾ ಹಾಕಿ ಅಸೋಸಿಯೇಷನ್' ತಂಡಗಳು ಮುಖಾಮುಖಿಯಾಗಿದ್ದು, ಪಂದ್ಯ ಪ್ರಗತಿಯಲ್ಲಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**